ಇ) ಮಾಹಿತಿ ನಮ್ಮಲ್ಲಿಲ್ಲ.

ಈ) ಬೀದರ್ ಜಿಲ್ಲೆಗೆ ಮಾತ್ರ.

ಉ) ಕರ್ನಾಟಕದಲ್ಲಿ ಈಗ ಉಪಯೋಗಿಸಲ್ಪಡುತ್ತಿರುವ ನೀರಿನ ಪ್ರಮಾಣ 4.60 ಟಿ.ಎಂ.ಸಿ.

ಬಚಾವತ್ ತೀರ್ಪಿನಂತೆ 2000ನೇ ಇಸವಿಯೊಳಗೆ ಕಷ್ಣಾ ನದಿಯ ನೀರಿನ ಬಳಕೆ

245 - ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬಚಾವತ್ ತೀರ್ಪಿನಂತೆ 2000ನೇ ಇಸವಿಯೊಳಗೆ ತನ್ನ ಪಾಲಿನ ಕೃಷ್ಣಾ ನದಿಯ ನೀರನ್ನು ಪೂರ್ಣವಾಗಿ ಬಳಸಿಕೊಳ್ಳಲು ರಾಜ್ಯ ಸರ್ಕಾರದ ಮುಂದಿರುವ ಕಾರ್ಯಕ್ರಮಗಳೇನು?*

ಆ) *ಇದುವರೆವಿಗೂ ರಾಜ್ಯ ಸರ್ಕಾರ ಕೃಷ್ಣಾ ನದಿಯಿಂದ ಎಷ್ಟು ಟಿ.ಎಂ.ಸಿ. ನೀರನ್ನು ಉಪಯೋಗಿಸಿಕೊಂಡಿದೆ?*

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) ರಾಜ್ಯದ ಪಾಲಿನ ನೀರನ್ನು ಬಳಸಲು ಒಂದು ಸಮಗ್ರ ಯೋಜನೆಯನ್ನು ತಯಾರು ಮಾಡಲಾಗಿದ್ದು, ಅದನ್ನು 2000 ಇಸವಿಯೊಳಗೆ ಕಾರ್ಯರೂಪಕ್ಕೆ ತರಲು ಪ್ರಯತ್ನ ಮಾಡಲಾಗುತ್ತಿದೆ.

ಆ) ಈಗ ಮುಗಿಸಿರುವ ಯೋಜನೆಗಳಿಂದ ಮತ್ತು ಭಾಗಶಃ ಕಾರ್ಯರೂಪದಲ್ಲಿರುವ ಯೋಜನೆಗಳಿಂದ ಸುಮಾರು 472ಟಿ.ಎಂ.ಸಿ. ನೀರನ್ನು ಉಪಯೋಗ ಮಾಡಬಹುದಾಗಿದೆ.

ಗಡಿ ಪ್ರದೇಶಗಳಲ್ಲಿರುವ ತಾಲ್ಲೂಕುಗಳ ಅಭಿವೃದ್ಧಿ

11 - ಶ್ರೀ ಎಂ.ವಿ. ವೆಂಕಟಪ್ಪ (ಮುಳಬಾಗಿಲು) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗಡಿ ಪ್ರದೇಶದಲ್ಲಿರುವ ತಾಲ್ಲೂಕುಗಳ ಅಭಿವೃದ್ಧಿಗಾಗಿ 1990-91-92-93-94-95 ವರ್ಷಗಳಲ್ಲಿ ನಿಗಧಿಪಡಿಸಿರುವ ಹಣದ ಮೊತ್ತವೆಷ್ಟು?*

ಆ) *ಕೆಲವೇ ತಾಲ್ಲೂಕ್‌ಗಳಿಗೆ ಹೆಚ್ಚಿನ ಮೊತ್ತವನ್ನು ಮಂಜೂರು ಮಾಡಿರುವ ಬಗ್ಗೆ ಮುಖ್ಯ ಕಾರಣಗಳೇನು? - ಆ ತಾಲ್ಲೂಕ್ ಗಳ ಹೆಸರು ಮತ್ತು ಮಂಜೂರಾದ ಹಣದ ಮೊತ್ತವೆಷ್ಟು?*

ಇ) *ಹಿಂದಿನ ಬಜೆಟ್ ಅಧಿವೇಶನದಲ್ಲಿ ಮಾಜಿ ಹಣಕಾಸಿನ ಮಂತ್ರಿಗಳು ವರ್ಷಕ್ಕೆ ಒಟ್ಟು ರೂ.15 ಕೋಟಿಗಳು ಮಂಜೂರು ಮಾಡುತ್ತೇವೆ ಎಂದು ಆಶ್ವಾಸನೆ ಕೊಟ್ಟಿರುವ ಪ್ರಯುಕ್ತ ಆ ಆಶ್ವಾಸನೆಯನ್ನು ಉಳಿಸಿಕೊಳ್ಳಲು ಸರ್ಕಾರದವರು ತಕ್ಕ ಕಾರ್ಯಕ್ರಮ ಕೈಗೊಳ್ಳುವರೇ?*

ಈ) *ಇಂತಹ ಗಡಿ ಪ್ರದೇಶದ ತಾಲ್ಲೂಕುಗಳೆಷ್ಟು, ಜಿಲ್ಲಾವಾರು ಸಂಖ್ಯೆ ಅವುಗಳ ಕೆಲಸಗಳೇನು?*

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) 1990-91ನೇ ಸಾಲಿನ ಗಡಿ ಪ್ರದೇಶ ಅಭಿವೃದ್ಧಿ ಕಾರ್ಯಕ್ರಮಕ್ಕೆ ರೂ.5 ಕೋಟಿಗಳನ್ನು ಮಂಜೂರು ಮಾಡಲಾಗಿದೆ. 1991-92ನೇ ಸಾಲಿನಿಂದ 1994-95ರ ವರೆಗೆ ಪ್ರತಿ ವರ್ಷಕ್ಕೆ ರೂ.10 ಕೋಟಿಗಳಂತೆ ಹಣವನ್ನು ಒದಗಿಸಲು ಉದ್ದೇಶಿಸಲಾಗಿದೆ.